## ಕರ್ನಾಟಕ ಸರ್ಕಾರದ ನಡವಳಿ

**ವಿಷಯ :** ಶ್ರೀ ಸೋಮಶೇಖರ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮೊಘ ಗ್ರಾಮ ಪಂಚಾಯಿತಿ, ಚಿಂಚೋಳಿ ತಾಲ್ಲೂಕು, ಕಲಬುರಗಿ ಜಿಲ್ಲೆ. ಪ್ರಸ್ತುತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚಿತ್ತರಗಿ ಗ್ರಾಮ ಪಂಚಾಯಿತಿ, ಹುನಗುಂದ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ವಿರುದ್ಧ ಮಾನ್ಯ ಲೋಕಾಯುಕ್ತ ಪ್ರಕರಣದಲ್ಲಿ ಅಂತಿಮ ದಂಡನಾ ಆದೇಶ ಹೊರಡಿಸುವ ಕುರಿತು.

**ಓದಲಾಗಿದೆ :**

1. ಉಪ ನಿಬಂಧಕರು (ವಿಚಾರಣೆಗಳು-3), ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಅ.ಸ.ಪ. ಸಂಖ್ಯೆ: ಕಂಪ್ಲೇಂಟ್/ಉಪಲೋಕ್/ಜಿಎಲ್‌ಬಿ/ 2144/2014/ಡಿಆರ್‌ಇ-3, ದಿನಾಂಕ:07.09.2016.
2. ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 565 ಗ್ರಾಪಂಕಾ 2016, ದಿನಾಂಕ 09.11.2016
3. ವಿಚಾರಣಾಧಿಕಾರಿಗಳು ಹಾಗೂ ಅಪರ ನಿಬಂಧಕರು (ವಿಚಾರಣೆಗಳು-9), ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ವಿಚಾರಣಾ ವರದಿ ಸಂಖ್ಯೆ: ಉಪಲೋಕ್-1/ಡಿಇ/644/ಎಆರ್‌ಇ-9, ದಿನಾಂಕ:08.03.2018.
4. ಮಾನ್ಯ ಉಪಲೋಕಾಯುಕ್ತರು-1 ರವರ ಶಿಫಾರಸ್ಸು ಸಂಖ್ಯೆ : ಉಪಲೋಕ್-1/ಡಿಇ/644/ಎಆರ್‌ಇ-9, ದಿನಾಂಕ:12.03.2018.
5. ಸರ್ಕಾರದ ಸಮಸಂಖ್ಯೆ ದಿನಾಂಕ 28.03.2018 ಮತ್ತು 16.12.2021ರ 2ನೇ ಕಾರಣ ಕೇಳುವ ನೋಟೀಸು.
6. ಆಪಾದಿತ ನೌಕರ ಶ್ರೀ ಸೋಮಶೇಖರ ಹೆಚ್.ಜಿ. ರವರ ಮನವಿ ದಿನಾಂಕ 07.01.2022.
7. ಸರ್ಕಾರದ ಸಮಸಂಖ್ಯೆ ಪತ್ರ ದಿನಾಂಕ 02.02.2022.
8. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಹುನಗುಂದ, ಬಾಗಲಕೋಟೆ ಜಿಲ್ಲೆ ಇವರ ಪತ್ರ ದಿನಾಂಕ 22.02.2022

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಾಂಕ(1)ರಲ್ಲಿ ಉಪ ನಿಬಂಧಕರು (ವಿಚಾರಣೆಗಳು-3), ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ವರದಿಯಲ್ಲಿ ಶ್ರೀ ಸೋಮಶೇಖರ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮೊಘ ಗ್ರಾಮ ಪಂಚಾಯಿತಿ, ಚಿಂಚೋಳಿ ತಾಲ್ಲೂಕು, ಕಲಬುರಗಿ ಜಿಲ್ಲೆ. ಪ್ರಸ್ತುತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚಿತ್ತರಗಿ ಗ್ರಾಮ ಪಂಚಾಯಿತಿ, ಹುನಗುಂದ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ವಿರುದ್ಧ ಮಾನ್ಯ ಲೋಕಾಯುಕ್ತದಲ್ಲಿ ದಾಖಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ, ಸದರಿ ನೌಕರರು ಕರ್ತವ್ಯ ನಿರ್ವಹಿಸುತ್ತಿದ್ದಾಗ 2013-14ನೇ ಸಾಲಿನ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸದೆ ಸುಮಾರು 40-50 ಲಕ್ಷಗಳ ಅನುದಾನವನ್ನು ದುರುಪಯೋಗಪಡಿಸಲಾಗಿರುತ್ತದೆ. 4 ರಿಂದ 5 ಉದ್ಯೋಗ ಚೀಟಿಗಳನ್ನು ಒಬ್ಬರ ಹೆಸರಿನಲ್ಲಿ ವಿತರಿಸಿ ಹಣ ದುರುಪಯೋಗ ಮಾಡಲಾಗಿರುತ್ತದೆ ಎಂದು ದೂರುದಾರರಾದ ಶ್ರೀ ರಾಜಕುಮಾರ್ ಪಾಟೀಲ್ ತಂದೆ ಗುರುಲಿಂಗಪ್ಪ ಪಾಟೀಲ್, ನಿಂಗದಹಳ್ಳಿ, ಮೊಘ ಗ್ರಾಮ ಪಂಚಾಯಿತಿ, ಚಿಂಚೋಳಿ ತಾಲ್ಲೂಕು, ಕಲಬುರಗಿ ಜಿಲ್ಲೆ ಇವರು ಸಲ್ಲಿಸಿದ ದೂರಿನಂತೆ ನಡೆಸಿದ ತನಿಖೆಯ ಅನುಸಾರ ಆಪಾಧಿತ ನೌಕರರ ಮೇಲಿನ ಆರೋಪಗಳು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಆಪಾಧಿತರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 14(ಎ) ರಡಿ ಇಲಾಖಾ ವಿಚಾರಣೆಗೆ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (2)ರಲ್ಲಿ ಶಿಸ್ತು ಪ್ರಾಧಿಕಾರವು ಮಾನ್ಯ ಉಪಲೋಕಾಯುಕ್ತರ ತನಿಖಾ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಿ ಆಪಾಧಿತ ನೌಕರರ ಮೇಲಿನ ಆಪಾಧನೆಗಳು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಪ್ರಕರಣದ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (3)ರಲ್ಲಿ ವಿಚಾರಣಾಧಿಕಾರಿಗಳು ಪ್ರಕರಣದ ಪೂರ್ಣ ಪ್ರಮಾಣದ ವಿಚಾರಣೆಯನ್ನು ನಡೆಸಿ ದಿನಾಂಕ 08.03.2018 ರಂದು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿರುವ ವಿಚಾರಣಾ ವರದಿಯಲ್ಲಿ ಆಪಾಧಿತ ನೌಕರರ ಮೇಲಿನ ಆರೋಪವು ರುಜುವಾತಾಗಿರುವುದಾಗಿ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (4)ರಲ್ಲಿ ಮಾನ್ಯ ಉಪಲೋಕಾಯುಕ್ತರು-1ರವರ ಶಿಫಾರಸ್ಸಿನಲ್ಲಿ ಆಪಾಧಿತ ನೌಕರರ ಮೇಲಿನ ಆರೋಪಗಳು ರುಜುವಾತಾಗಿರುವುದರಿಂದ **ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 8(iii) ರನ್ವಯ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯವ ಮತ್ತು ಸದರಿ ನಿಯಮದ ನಿಯಮ 8(iii)(ಎ)ರನ್ವಯ ಇವರನ್ನು ಬಡ್ತಿಗೆ ಪರಿಗಣಿಸಿದಾಗ ಸದರಿಯವರ ಮುಂಬಡ್ತಿಯನ್ನು ನಾಲ್ಕು ವರ್ಷಗಳ ಅವಧಿಗೆ ಮುಂದೂಡುವ ದಂಡನೆ** ವಿಧಿಸುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (5)ರಲ್ಲಿ ಆಪಾಧಿತ ನೌಕರರಿಗೆ ದಿನಾಂಕ 28.03.2018 ರಂದು ಅಪರ ನಿಬಂಧಕರು, ವಿಚಾರಣೆಗಳು-9, ಕರ್ನಾಟಕ ಲೋಕಾಯುಕ್ತ ಇವರು ದಿನಾಂಕ 08.03.2018 ರಂದು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿರುವ ವಿಚಾರಣಾ ವರದಿ ಮತ್ತು ವರದಿಯ ಮೇಲೆ ಮಾನ್ಯ ಉಪಲೋಕಾಯುಕ್ತರು ದಿನಾಂಕ 12.03.2018 ರಂದು ಮಾಡಿರುವ ಶಿಫಾರಸ್ಸಿನ ಪ್ರತಿಗಳೊಂದಿಗೆ 2ನೇ ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಲಾಗಿದೆ. ಆಪಾಧಿತ ನೌಕರರಿಂದ ಯಾವುದೇ ಲಿಖಿತ ಸಮಜಾಯಿಷಿ ಸ್ವೀಕೃತವಾಗದೇ ಇರುವುದರಿಂದ ಸಂಬಂಧಪಟ್ಟ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ, ಕಲಬುರಗಿ ಜಿಲ್ಲಾ ಪಂಚಾಯಿತಿರವರಿಗೆ ದೂರವಾಣಿ ಮೂಲಕ ಸಂಪರ್ಕಿಸಿ ವಿಚಾರಿಸಲಾಗಿ ಆಪಾಧಿತ ನೌಕರರು ಪ್ರಸ್ತುತ ಚಿತ್ತರಗಿ ಗಾಮ ಪಂಚಾಯಿತಿ, ಹುನಗುಂದ ತಾಲ್ಲೂಕು, ಬಾಗಕೋಟೆ ಜಿಲ್ಲೆ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿರುವುದಾಗಿ ತಿಳಿಸಿದ್ದರ ಹಿನ್ನೆಲೆಯಲ್ಲಿ ಆಪಾಧಿತ ನೌಕರರ ಪ್ರಸ್ತುತ ವಿಳಾಸಕ್ಕೆ ಮತ್ತು ಮುಖ್ಯಕಾರ್ಯನಿರ್ವಹಣಾಧಿಕಾರಿ, ಬಾಗಲಕೋಟೆ ಜಿಲ್ಲೆ ಮತ್ತು ತಾಲ್ಲೂಕು ಪಂಚಾಯಿತಿ ಹುನಗುಂದ ತಾಲ್ಲೂಕು ಕಾರ್ಯನಿರ್ವಹಣಾಧಿಕಾರಿಯವರಿಗೆ 2ನೇ ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಿ ಅವರಿಂದ ಸ್ವೀಕೃತಿ ಪಡೆದು ಕಳುಹಿಸುವಂತೆ ಕೋರಲಾಗಿದೆ.

ಮೇಲೆ ಓದಲಾದ ಕ್ರಮಾಂಕ (6)ರಲ್ಲಿ ಆಪಾದಿತ ನೌಕರರಾದ ಶ್ರೀ ಸೋಮಶೇಖರ ಹೆಚ್.ಜಿ. ರವರು ಮನವಿ ಸಲ್ಲಿಸಿ ದಿನಾಂಕ 16.12.2021 ರಂದು ಜಾರಿಗೊಳಿಸಲಾದ 2ನೇ ಕಾರಣ ಕೇಳುವ ನೋಟೀಸಿಗೆ ಲಿಖಿತ ಸಮಜಾಯಿಷಿ ಸಲ್ಲಿಸಲು ಮತ್ತು ಸದರಿ ತನಿಖಾ ಅವಧಿಯಲ್ಲಿ ನನ್ನ ರಕ್ಷಣಾತ್ಮಕ ಹೇಳಿಕೆಯ ಅವಕಾಶವನ್ನು ನನಗೆ ಒದಗಿಸಿರುವುದಿಲ್ಲ. ನನ್ನ ರಕ್ಷಣಾತ್ಮಕ ಹೇಳಿಕೆಯನ್ನು ದಾಖಲಿಸಲು ಅವಶ್ಯವಿರುವ ಕಚೇರಿ ದಾಖಲೆಗಳನ್ನು ಸಂಗ್ರಹಿಸಲು 30 ದಿನಗಳ ಕಾಲ ಹೆಚ್ಚುವರಿ ಕಾಲಾವಕಾಶವನ್ನು ನೀಡುವಂತೆಯೂ ಗುಲ್ಬರ್ಗಾ ಜಿಲ್ಲೆಯ ಚಿಂಚೋಳಿ ತಾಲ್ಲೂಕಿನ ಮೊಘ ಗ್ರಾಮ ಪಂಚಾಯಿತಿಯಲ್ಲಿನ ದಾಖಲೆಗಳನ್ನು ಸಕಾಲದಲ್ಲಿ ಪಡೆದುಕೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿ ಅನುಕೂಲ ಮಾಡಿಕೊಡುವಂತೆ ವಿನಂತಿಸಿಕೊಂಡಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (7)ರಲ್ಲಿ ನೋಂದಾಯಿತ ಅಂಚೆಯ ಮೂಲಕ ಆಪಾಧಿತ ನೌಕರರು ದಿ:07.01.2022 ರಂದು ಸಲ್ಲಿಸಿರುವ ಮನವಿಯನ್ನು ಲಗತ್ತಿಸಿ ಆಪಾಧಿತ ನೌಕರರು ಬಯಸಿರುವ ದಾಖಲೆಗಳನ್ನು ಪಡೆದುಕೊಳ್ಳಲು ನಿರ್ದೇಶನ ನೀಡಲಾಗಿದೆ. ಮತ್ತು ಸದರಿ ನೌಕರರಿಗೂ ತಿಳಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (8)ರಲ್ಲಿ ಅದರಂತೆ ಆಪಾಧಿತ ನೌಕರರಿಗೆ ದಿನಾಂಕ 22.02.2022ರ ನಿರ್ದೇಶನದ ಪತ್ರವನ್ನು ಜಾರಿಗೊಳಿಸಿ ಅವರಿಂದ ದಿನಾಂಕ 16.02.2022 ರಂದು ಸ್ವೀಕೃತಿ ಪಡೆದು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಆಪಾಧಿತ ನೌಕರರು ದಿನಾಂಕ 16.12.2021 ಮತ್ತು 02.02.2022ರ ನೋಟೀಸು/ಪತ್ರಗಳಿಗೆ ಯಾವುದೇ ಸಮಜಾಯಿಷಿ ಸಲ್ಲಿಸಿರುವುದಿಲ್ಲ. ಹಾಗಾಗಿ ಮಾನ್ಯ ಉಪಲೋಕಾಯುಕ್ತರು ದಿನಾಂಕ 12.03.2018 ರಂದು ಆಪಾಧಿತ ನೌಕರರ ಮೇಲಿನ ಆರೋಪಗಳು ರುಜುವಾತಾಗಿರುವುದಾಗಿ ಶಿಫಾರಸ್ಸು ಮಾಡಿರುವ ದಂಡನೆ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ

8(iii) ರನ್ವಯ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯವ ಮತ್ತು ಸದರಿ ನಿಯಮದ ನಿಯಮ 8(iii)(ಎ)ರನ್ವಯ ಇವರನ್ನು ಬಡ್ತಿಗೆ ಪರಿಗಣಿಸಿದಾಗ ಸದರಿಯವರ ಮುಂಬಡ್ತಿಯನ್ನು ನಾಲ್ಕು ವರ್ಷಗಳ ಅವಧಿಗೆ ಮುಂದೂಡುವ ದಂಡನೆ ವಿಧಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/170/ಗ್ರಾಪಂಕಾ/2018, ಬೆಂಗಳೂರು, ದಿನಾಂಕ: 16ನೇ ಆಗಸ್ಟ್ 2022.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಸೋಮಶೇಖರ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮೊಘ ಗ್ರಾಮ ಪಂಚಾಯಿತಿ, ಚಿಂಚೋಳಿ ತಾಲ್ಲೂಕು, ಕಲಬುರಗಿ ಜಿಲ್ಲೆ. ಪ್ರಸ್ತುತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚಿತ್ತರಗಿ ಗ್ರಾಮ ಪಂಚಾಯಿತಿ, ಹುನಗುಂದ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ವಿರುದ್ಧದ ಆರೋಪಗಳು ರುಜುವಾತಾಗಿರುವುದರಿಂದ **ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 8(iii) ರನ್ವಯ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯವ ಮತ್ತು ಸದರಿ ನಿಯಮದ ನಿಯಮ 8(iii)(ಎ)ರನ್ವಯ ಇವರನ್ನು ಬಡ್ತಿಗೆ ಪರಿಗಣಿಸಿದಾಗ ಸದರಿಯವರ ಮುಂಬಡ್ತಿಯನ್ನು ನಾಲ್ಕು ವರ್ಷಗಳ ಅವಧಿಗೆ ಮುಂದೂಡುವ ದಂಡನೆ** ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar 16/8/22
(ನವೀನ್ ಕುಮಾರ್ ಬಿ.)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ(ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
16/8/22

ಇವರಿಗೆ:-

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು-1, ಕರ್ನಾಟಕ, ಬಹುಮಹಡಿ ಕಟ್ಟಡ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು
4) ಅಪರ ನಿಬಂಧಕರು(ವಿಚಾರಣೆಗಳು-9), ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು
5) ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯಿತಿ, ಕಲಬುರಗಿ ಜಿಲ್ಲೆ.
6) ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯಿತಿ, ಬಾಗಲಕೋಟೆ ಜಿಲ್ಲೆ.
7) ಕಾರ್ಯನಿರ್ವಹಣಾಧಿಕಾರಿ, ತಾಲ್ಲೂಕು ಪಂಚಾಯಿತಿ, ಚಿಂಚೋಳಿ ತಾಲ್ಲೂಕು, ಕಲಬುರಗಿ ಜಿಲ್ಲೆ.
8) ಕಾರ್ಯನಿರ್ವಹಣಾಧಿಕಾರಿ, ತಾಲ್ಲೂಕು ಪಂಚಾಯಿತಿ, ಹುನಗುಂದ ತಾಲ್ಲೂಕು, ಬಾಗಲಕೋಟೆ ಜಿಲ್ಲೆ.
9) ಶ್ರೀ ಸೋಮಶೇಖರ, ಪ್ರಸ್ತುತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚಿತ್ತರಗಿ ಗ್ರಾಮ ಪಂಚಾಯಿತಿ, ಹುನಗುಂದ ತಾಲ್ಲೂಕು, ಬಾಗಲಕೋಟೆ ಜಿಲ್ಲೆ
10) ನಿರ್ದೇಶಕರು (ಇ-ಆಡಳಿತ), ಇಲಾಖಾ ವೆಬ್-ಸೈಟಿನಲ್ಲಿ ಪ್ರಕಟಿಸಲು.
11) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.